**National**
**Kannada**
**01.04.2025 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ವಿಪತ್ತು ನಿರ್ವಹಣೆ, ಸಾಂಸ್ಕೃತಿಕ ವಿನಿಮಯದಲ್ಲಿ ಪರಸ್ಪರ ಸಹಕಾರಕ್ಕಾಗಿ ಭಾರತ-ಚಿಲಿ ಒಪ್ಪಂದ

೨. ವಕ್ಫ್ ತಿದ್ದುಪಡಿ ವಿಧೇಯಕ-೨೦೨೫ ಕುರಿತು ಲೋಕಸಭೆಯಲ್ಲಿ ನಾಳೆ ಚರ್ಚೆ- ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು

೩. ವೇವ್ಸ್ 'ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್': ೭೫ ಸಾವಿರ ಸ್ಪರ್ಧಿಗಳು ನೋಂದಣಿ

೪. ಐಪಿಎಲ್ ಟಿ-೨೦ ಕ್ರಿಕೆಟ್; ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಫೀಲ್ಡಿಂಗ್ ಆಯ್ಕೆ

<><*<><>*><>

ವಿಪತ್ತು ನಿರ್ವಹಣೆ ಮತ್ತು ಸಾಂಸ್ಕೃತಿಕ ವಿನಿಮಯದಲ್ಲಿ ಪರಸ್ಪರ ಸಹಕಾರಕ್ಕಾಗಿ ಭಾರತ ಮತ್ತು ಚಿಲಿ ಇಂದು ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡವು. ಇದೇ ವೇಳೆ ಅಂಟಾರ್ಕ್ಟಿಕಾ ಸಹಕಾರದ ಕುರಿತು ಉಭಯ ದೇಶಗಳು ಆಶಯ ಪತ್ರಗಳನ್ನು ಪರಸ್ಪರ ವಿನಿಮಾಡಿಕೊಂಡವು. ನವದೆಹಲಿಯಲ್ಲಿಂದು ಚಿಲಿ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಫಾಂಟ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ನಂತರ ನಡೆದ ಜಂಟಿ ಪ್ರತಿಕಾಗೋಷ್ಠಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಲ್ಯಾಟಿನ್ ಅಮೆರಿಕದಲ್ಲಿ ಚಿಲಿ, ಭಾರತದ ಪ್ರಮುಖ ಸ್ನೇಹಿತ ಮತ್ತು ಪಾಲುದಾರ ರಾಷ್ಟ್ರವಾಗಿದೆ. ಮುಂಬರುವ ದಶಕದಲ್ಲಿ ಉಭಯ ದೇಶಗಳ ನಡುವಿನ ಪರಸ್ಪರ ಸಹಕಾರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನೂತನ ಉಪ್ರಕಮಗಳ ಕುರಿತು ಚರ್ಚಿಸಲಾಯಿತು ಎಂದರು. ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ನವಿಕರಿಸಬಹುದಾದ ಇಂಧನ, ರೈಲ್ವೆ, ಬಾಹ್ಯಾಕಾಶ ಮತ್ತು ಇತರೆ ವಲಯಗಳಲ್ಲಿ ಚಿಲಿಯೊಂದಿಗೆ ತನ್ನ ಸಕಾರಾತ್ಮಕ ಅನುಭವವನ್ನು ಹಂಚಿಕೊಳ್ಳಲು ಭಾರತ ಸಿದ್ಧವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಚಿಲಿಯ ಜನರು ಯೋಗವನ್ನು ಆರೋಗ್ಯಕರ ಜೀವನಶೈಲಿಗಾಗಿ ಅಳವಡಿಸಿಕೊಂಡಿರುವುದು ಬಹಳ

ಸಂತೋಷದ ವಿಷಯ. ನವಂಬರ್ ೪ ಅನ್ನು ಚಿಲಿಯಲ್ಲಿ ರಾಷ್ಟ್ರೀಯ ಯೋಗ ದಿನವೆಂದು ಘೋಷಿಸಿರುವುದು ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದು ಪ್ರಧಾನಿ ಹೇಳಿದರು.

<><*<><>*><>

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ರಸಗೊಬ್ಬರಗಳ ಬೆಲೆ ಏರುತ್ತಿದ್ದರೂ ಕೇಂದ್ರ ಸರ್ಕಾರವು ರೈತರಿಗೆ ಕೈಗೆಟಕುವ ಬೆಲೆಯಲ್ಲಿ ಸಬ್ಸಿಡಿ ರಸಗೊಬ್ಬರಗಳನ್ನು ಒದಗಿಸುತ್ತಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಮಾತನಾಡಿದ ಸಚಿವರು, ಕೃಷಿ ಉತ್ಪಾದನೆಗೆ ರಸಗೊಬ್ಬರವು ಅತ್ಯಗತ್ಯ ಅಂಶವಾಗಿದೆ. ಸರ್ಕಾರವು ರಸಗೊಬ್ಬರ ಬೆಲೆಯನ್ನು ಪರಿಶೀಲಿಸಲು ಕ್ರಮಗಳನ್ನು ತೆಗೆದುಕೊಂಡಿದೆ. ಪ್ರತಿ ಯೂರಿಯಾ ಚೀಲಕ್ಕೆ ೨೬೬ ರೂಪಾಯಿಯಂತೆ ರೈತರಿಗೆ ಒದಗಿಸಲಾಗುತ್ತದೆ ಎಂದು ತಿಳಿಸಿದರು. ಈ ವರ್ಷದ ಆಯವ್ಯಯದಲ್ಲಿ ಕೃಷಿ ವಲಯಕ್ಕೆ ದಾಖಲೆಯ ಅನುದಾನ ಹಂಚಿಕೆ ಮಾಡಲಾಗಿದೆ. ಹವಾಮಾನ ಬದಲಾವಣೆಯು ಬೆಳಗಳ ಮೇಲೆ ಬೀರುವ ಪರಿಣಾಮವನ್ನು ತಗ್ಗಿಸಲು, ಸರ್ಕಾರವು ರೈತರಿಗೆ ಹವಾಮಾನಕ್ಕೆ ಹೊಂದುವ, ಹೆಚ್ಚಿನ ಇಳುವರಿ ನೀಡುವ ವಿವಿಧ ಬಿತ್ತನೆ ಬೀಜಗಳನ್ನು ಒದಗಿಸಲು ನಿರ್ಧರಿಸಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

<><*<><>*><>

ರಾಜ್ಯಸಭೆಯಲ್ಲಿಂದು ವಿಮಾನ ವಸ್ತುಗಳ ಮೇಲಿನ ಹಿತಾಸಕ್ತಿಗಳ ಸಂರಕ್ಷಣಾ ವಿಧೇಯಕ, ೨೦೨೫ ಅನ್ನು ಅಂಗೀಕರಿಸಲಾಗಿದೆ.  ವಿಧೇಯಕದ ಮೇಲಿನ ಚರ್ಚೆಗೆ ಉತ್ತರಿಸಿದ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು, ಭಾರತವು ವಿಶ್ವದ ಮೂರನೇ ಅತಿದೊಡ್ಡ ದೇಶೀಯ ನಾಗರಿಕ ವಿಮಾನಯಾನ ಮಾರುಕಟ್ಟೆಯಾಗಿದೆ. ಕಳೆದ ಹತ್ತು ವರ್ಷಗಳಲ್ಲಿ ವಾಯುಯಾನ ಕ್ಷೇತ್ರದಲ್ಲಿ ಅಗಾಧ ಪ್ರಗತಿ ಕಂಡುಬಂದಿದೆ ಎಂದು ಹೇಳಿದರು.  ಇದಕ್ಕೂ ಮುನ್ನ, ಚರ್ಚೆಯಲ್ಲಿ ಭಾಗವಹಿಸಿದ ಬಿಜೆಪಿಯ ಸದಾನಂದ ಮ್ಹಾಲು ಶೇಟ್ ಮಾತನಾಡಿ, ಈ ವಿಧೇಯಕವು ಹೂಡಿಕೆದಾರರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ವಾಯುಯಾನ ಕ್ಷೇತ್ರದಲ್ಲಿ ಭಾರತದ ಜಾಗತಿಕ ಸ್ಥಾನಮಾನವನ್ನು ಹೆಚ್ಚಿಸುತ್ತದೆ ಎಂದರು.  ವಿಶ್ವದ ಅತಿದೊಡ್ಡ ಬೆಳೆಯುತ್ತಿರುವ ವಾಯುಯಾನ ಮಾರುಕಟ್ಟೆಗಳಲ್ಲಿ ಭಾರತ ಒಂದಾಗಿದೆ. ದೇಶದ ವಾಯುಯಾನ ವಲಯದ ಬೆಳವಣಿಗೆಯು, ೨೦೨೪ ರಲ್ಲಿ ಅಂದಾಜು ೧೩.೮೮ ಶತಕೋಟಿ ಡಾಲರ್ ಇದ್ದು, ಇದು ೨೦೩೦ ರ ವೇಳೆಗೆ ೨೬.೮ ಶತಕೋಟಿ ಡಾಲರ್ ತಲುಪುವ ನಿರೀಕ್ಷೆಯಿದೆ ಎಂದು ಹೇಳಿದರು.

<><*<><>*><>

ವಕ್ಫ್ ತಿದ್ದುಪಡಿ ವಿಧೇಯಕ-೨೦೨೫, ನಾಳೆ ಲೋಕಸಭೆಯಲ್ಲಿ ಚರ್ಚೆ ಬರಲಿದೆ ಎಂದು ಕೇಂದ್ರ ಸಂದೀಯ ವ್ಯವಹಾರಗಳು ಹಾಗೂ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಈ ಕುರಿತು ಸಂಸತ್ ಭವನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಧೇಯಕದ ಕುರಿತು ಸದನದಲ್ಲಿ ೮ ಗಂಟೆಗಳ ಕಾಲ ಚರ್ಚೆ ನಡೆಸಲು ನಿರ್ಧರಿಸಲಾಗಿದೆ. ಅಗತ್ಯಬಿದ್ದರೆ ವ್ಯವಹಾರ ಸಲಹಾ ಸಮಿತಿ ಸಭೆಯಲ್ಲಿ ಈ ಸಮಯವನ್ನು ಹೆಚ್ಚಿಸಬಹುದು. ವಿಧೇಯಕದ ಕುರಿತ ಎಲ್ಲಾ ಪ್ರಶ್ನೆಗಳಿಗೆ ಉತ್ತರಿಸಲು ಸರ್ಕಾರ ಸಿದ್ಧವಿದೆ ಎಂದು ಹೇಳಿದರು. ವಿರೋಧ ಪಕ್ಷಗಳು ತಮ್ಮ ತುಷ್ಟೀಕರಣ ರಾಜಕೀಯದಿಂದಾಗಿ ವಿಧೇಯಕವನ್ನು ವಿರೋಧಿಸುತ್ತಿವೆ ಎಂದು ಸಚಿವ ಕಿರಣ್ ರಿಜಿಜು ಆರೋಪಿಸಿದರು.

ಧ್ವನಿ: ಸಚಿವ ಕಿರಣ್ ರಿಜಿಜು ( ೨೮ ಸೆಕೆಂಡ್ಸ್ )

<><*<><>*><>

ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ಭಾಗವಾಗಿರುವ 'ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್' ಆವೃತ್ತಿ ಒಂದರಲ್ಲಿ, ೧ ಸಾವಿರದ ೧೦೦ ಅಂತಾರಾಷ್ಟ್ರೀಯ ಸ್ಪರ್ಧಿಗಳು ಸೇರಿದಂತೆ ಒಟ್ಟು ೮೫ ಸಾವಿರ ಸ್ಪರ್ಧಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಕಠಿಣ ಆಯ್ಕೆ ಪ್ರಕ್ರಿಯೆಯ ನಂತರ ೩೨ ವಿವಿಧ ವಿಭಾಗಗಳಲ್ಲಿ ೭೫೦ಕ್ಕೂ ಹೆಚ್ಚು ಅಂತಿಮ ಸ್ಪರ್ಧಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ. ಸ್ಪರ್ಧಿಗಳು ತಮ್ಮ ಪ್ರತಿಭೆ ಮತ್ತು ಕೌಶಲ್ಯಗಳನ್ನು ಪ್ರದರ್ಶಿಸಲು ಇಲ್ಲಿ ಅವಕಾವಿರುತ್ತದೆ. ಆಯ ವಲಯಗಳ ಉದ್ಯಮ ನಾಯಕರೊಂದಿಗೆ ಸಂಪರ್ಕ ಅವಕಾಶಗಳನ್ನೂ ಸಹ ಒದಗಿಸಲಾಗುತ್ತದೆ. ಮಾಸ್ಟರ್ ಕ್ಲಾಸ್‌ಗಳು, ಸಂವಾದ ಮತ್ತು ಚರ್ಚೆಗಳು ಹಾಗೂ ಸಮ್ಮೇಳನಗಳ ಮೂಲಕ ಜಾಗತಿಕ ದಿಗ್ಗಜರೊಂದಿಗೆ ಕಲಿಯುವ ಅವಕಾಶವನ್ನು ಇದು ಒದಗಿಸುತ್ತದೆ. ಸಮಾರಂಭದಲ್ಲಿ 'ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್' ನ ವಿಜೇತರಿಗೆ 'ವೇವ್ಸ್ ಕ್ರಿಯೇಟರ್ ಪ್ರಶಸ್ತಿ' ನೀಡಿ ಗೌರವಿಸಲಾಗುವುದು. ವೇವ್ಸ್ ಶೃಂಗಸಭೆಯ ಮೊದಲ ಆವೃತ್ತಿಯು ಮುಂಬೈನಲ್ಲಿ ಮೇ ೧ ರಿಂದ ೪ರವರೆಗೆ ನಡೆಯಲಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

<><*<><>*><>

ಜಪಾನ್‌ನ ಟೋಕಿಯೋದಲ್ಲಿಂದು ಮೂರನೇ ಭಾರತ-ಜಪಾನ್ ಬಾಹ್ಯಾಕಾಶ ಸಂವಾದ ನಡೆಯಿತು. ಸಂವಾದದಲ್ಲಿ ರಾಷ್ಟ್ರೀಯ ಬಾಹ್ಯಾಕಾಶ ಕಾರ್ಯಕ್ರಮಗಳು, ದ್ವಿಪಕ್ಷೀಯ ಬಾಹ್ಯಾಕಾಶ ಸಹಕಾರ, ಬಾಹ್ಯಾಕಾಶ ಪರಿಸ್ಥಿತಿ ಅರಿವು, ಬಾಹ್ಯಾಕಾಶ ಭದ್ರತೆ, ಕ್ವಾಡ್ ಬಾಹ್ಯಾಕಾಶ ಸಹಕಾರ, ಕೈಗಾರಿಕಾ ಮಟ್ಟದ ಸಹಕಾರ ಮತ್ತು ವಾಣಿಜ್ಯ ಬಾಹ್ಯಾಕಾಶ ಸಹಯೋಗದ ಕುರಿತು ಚರ್ಚೆಗಳು ನಡೆಯಿತು.

<><*<><>*><>

ಭಾರತ-ಅಮೆರಿಕಾ ದ್ವಿಪಕ್ಷೀಯ ಟ್ರೈ-ಸರ್ವಿಸ್ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ಸಮರಾಭ್ಯಾಸ ಟೈಗರ್ ಟ್ರಯಂಫ್‌ನ ನಾಲ್ಕನೇ ಆವೃತ್ತಿಯು ಇಂದು ವಿಶಾಖಪಟ್ಟಣದಲ್ಲಿ ಪ್ರಾರಂಭವಾಗಿದೆ. ಹದಿನೈದು ದಿನಗಳ ಕಾಲ ನಡೆಯುವ ಈ ಸಮರಾಭ್ಯಾಸವು ಎರಡೂ ದೇಶಗಳ ನಡುವೆ ಪರಸ್ಪರ ಕಾರ್ಯಸಾಧ್ಯತೆಯನ್ನು ಅಭಿವೃದ್ಧಿಪಡಿಸುವ ಹಾಗೂ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ಕಾರ್ಯಾಚರಣೆಗಳನ್ನು ನಡೆಸಲು ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳನ್ನು ರೂಪಿಸುವ ಗುರಿಯನ್ನು ಹೊಂದಿದೆ.

<><*<><>*><>

ತೆರಿಗೆ ಕ್ರಮಗಳು ಮತ್ತು ನಿರಂತರ ವಿತ್ತೀಯ ಸಡಿಲಿಕೆಯಿಂದ ಭಾರತದ ಜಿಡಿಪಿ ಬೆಳವಣಿಗೆ ಶೇಕಡ ೬.೫ ರಷ್ಟು ಮುಂದುವರಿಯಲಿದೆ. ಈ ಮೂಲಕ ಮುಂದುವರಿದ ಮತ್ತು ಉದಯೋನ್ಮುಖ ಜಿ-೨೦ ದೇಶಗಳಲ್ಲಿ ಭಾರತ ಪ್ರಥಮ ಸ್ಥಾನದಲ್ಲಿ ನಿಲ್ಲುತ್ತದೆ ಎಂದು ಮೂಡೀಸ್ ರೇಟಿಂಗ್ಸ್ ಹೇಳಿದೆ. ಉದಯೋನ್ಮುಖ ಮಾರುಕಟ್ಟೆಗಳ ಕುರಿತಾದ ತನ್ನ ವರದಿಯಲ್ಲಿ, ಅಮೆರಿಕ ನೀತಿಗಳ ಬದಲಾವಣೆಯಿಂದಾಗಿ ಉದಯೋನ್ಮುಖ ಆರ್ಥಿಕತೆಗಳು ಅಸ್ಥಿರತೆಗೆ ಒಡ್ಡಿಕೊಳ್ಳುತ್ತದೆ. ವೇಗವಾಗಿ ಬೆಳೆಯುತ್ತಿರುವ ಆರ್ಥಿಕ ರಾಷ್ಟ್ರಗಳಲ್ಲಿನ ಆರ್ಥಿಕ ಚಟುವಟಿಕೆಗಳು ಉನ್ನತಮಟ್ಟದಿಂದ ಸ್ವಲ್ಪ ನಿಧಾನವಾಗುತ್ತದೆ. ಆದರೆ, ಈ ವರ್ಷ ಮತ್ತು ಮುಂದಿನ ವರ್ಷ ಸ್ಥಿರವಾಗಿ ಉಳಿಯುತ್ತವೆ ಎಂದು ಮೂಡೀಸ್ ರೇಟಿಂಗ್ಸ್ ಹೇಳಿದೆ.

<><*<><>*><>

ಅಪರಾಧವನ್ನು ನಿಭಾಯಿಸಲು, ತಾಂತ್ರಿಕ ಕಾನೂನು ವಿಧಾನಕ್ಕೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಕರೆ ನೀಡಿದರು. ಕೇಂದ್ರ ತನಿಖಾ ದಳದ ೬೨ನೇ ಸಂಸ್ಥಾಪನಾ ದಿನದ ಸಮಾರಂಭದಲ್ಲಿ ಮಾತನಾಡಿದ ಅವರು, ತಾಂತ್ರಿಕ, ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಯು ಸಾಂಪ್ರದಾಯಿಕ ತನಿಖೆಯ ರೀತಿಯನ್ನು ಬದಲಾಯಿಸಿದೆ ಎಂದರು. ತಾಂತ್ರಿಕ

ಪರಿಹಾರಗಳನ್ನು ರಚಿಸಲು ದೇಶದ ವಿಜ್ಞಾನಿಗಳು ಮತ್ತು ಸಂಶೋಧಕರ ಶಕ್ತಿಯನ್ನು ಬಳಸಿಕೊಳ್ಳುವ ಅಗತ್ಯತೆ ಮತ್ತು ವಿವಿಧ ಸಂಸ್ಥೆಗಳು, ಸಚಿವಾಲಯಗಳೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವ ಮೂಲಕ ಅತ್ಯಾಧುನಿಕ ಸೈಬರ್ ವಿಧಿ-ವಿಜ್ಞಾನ ಪ್ರಯೋಗಾಲಯಗಳನ್ನು ಆರಂಭಿಸುವಂತೆ ಅವರು ಕರೆ ನೀಡಿದರು.

<><*<><>*><>

ಉತ್ತರಪ್ರದೇಶದ ಎಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>